ಎ-330 (6)

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ

## ವಿಷಯ

ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪಾರ್ಟ್ ಟೈಂ ಮತ್ತು ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ಕಳೆದ 2 ವರ್ಷಗಳಿಂದ ವೇತನ ನೀಡದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

## ಉತ್ತರ

ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ರೂ. 1074.62 ಲಕ್ಷ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ರೂ. 354.50 ಲಕ್ಷಗಳು ಹೀಗೆ ಒಟ್ಟು ರೂ. 1429.12 ಲಕ್ಷಗಳ ಅತಿಥಿ ಉಪನ್ಯಾಸಕರ ಭತ್ಯೆ ಪಾವತಿ ಬಾಕಿ ಇರುತ್ತದೆ.

2020-21 ನೇ ಸಾಲಿನ ಆಯವ್ಯಯದಲ್ಲಿ ಅತಿಥಿ ಉಪನ್ಯಾಸಕರ ಭತ್ಯೆ ಪಾವತಿಸಲು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ ರೂ. 408.00 ಲಕ್ಷಗಳನ್ನು ಹಾಗೂ ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ ರೂ. 1286.00 ಲಕ್ಷಗಳನ್ನು ಹೀಗೆ ಒಟ್ಟು ರೂ. 1694.00 ಲಕ್ಷಗಳನ್ನು ಒದಗಿಸಲಾಗಿದೆ. ಸದರಿ ಅನುದಾನದಲ್ಲಿ 2019-20 ಮತ್ತು ಹಿಂದಿನ ಸಾಲಿನಲ್ಲಿ ಅತಿಥಿ ಉಪನ್ಯಾಸಕರಿಗೆ ಪಾವತಿಸಬೇಕಾದ ಬಾಕಿ ಗೌರವ ಧನವನ್ನು ಪಾವತಿಸಲು ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ಸಹಮತಿ ದೊರೆತ ಕೂಡಲೇ ಅತಿಥಿ ಉಪನ್ಯಾಸಕರುಗಳಿಗೆ ಹಿಂದಿನ ಬಾಕಿಯನ್ನು ಪಾವತಿಸಲು ಕ್ರಮವಹಿಸಲಾಗುವುದು.

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕಡತ ಸಂಖ್ಯೆ: ಇಡಿ 103 ಹೆಚ್‌ಪಿಟಿ 2020